ಕರ್ನಾಟಕ ಸರ್ಕಾರ

ಸಂಖ್ಯೆ:ಡಿಟಿಇ/ಎಡಿಎಂ10/ಇಎಸ್‌ಟಿ/9/2022 / 1296

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-56001
ದಿನಾಂಕ: 07-03-2022

## ಸುತ್ತೋಲೆ

ವಿಷಯ: ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ /ಸಿಬ್ಬಂದಿ ವರ್ಗದವರು ನಗದು ವಹಿಯಲ್ಲಿ ನಗದು ಘೋಷಣೆ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ (ಆಸು) ಕತವ 2022 ದಿನಾಂಕ:04.02.2022

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಸುತ್ತೋಲೆಯನ್ವಯ ಈ ಕೆಳಕಂಡ ಸೂಚನೆಗಳನ್ನು ಪಾಲಿಸುವುದು ಈ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರು, ಕಛೇರಿಯ ಕೆಲಸಕ್ಕೆ ಹಾಜರಾಗಿ ಹಾಜರಾತಿ ವಹಿ/ಎ.ಎಂ.ಎಸ್ ನಲ್ಲಿ ಕೆಲಸಕ್ಕೆ ವರದಿ ಮಾಡಿದ ತಕ್ಷಣ ಕಛೇರಿಗೆ ತಂದ ನಗದು ಮೊತ್ತವನ್ನು "ನಗದು ಘೋಷಣೆ" ವಹಿಯಲ್ಲಿ ತಮ್ಮ ಸಹಿಯೊಂದಿಗೆ ಘೋಷಿಸತಕ್ಕದ್ದು

1. ನಗದು ಘೋಷಣಾ ವಹಿಯು ಈ ಕಛೇರಿಯ ಶ್ರೀ ನಾಗೇಂದ್ರ.ಎಸ್.ಪಿ ರಿಜಿಸ್ಟ್ರಾರ್, (ಆಡಳಿತ) ರವರ ವಷದಲ್ಲಿರತಕ್ಕದ್ದು
2. ಯಾವುದೇ ನೌಕರನು ನಗದು ಘೋಷಣೆ ವಹಿಯಲ್ಲಿ ಘೋಷಿಸಿದ್ದಕ್ಕಿಂತ ಹೆಚ್ಚಿನ ಹಣವನ್ನು ಹೊಂದಿರುವುದು ಕಂಡು ಬಂದರೆ, ಅಂತಹ ಹೆಚ್ಚುವರಿ ಹಣವನ್ನು ಅಕ್ರಮ ಸಂಪಾದನೆ ಎಂದು ಅರ್ಥೈಸಲಾಗುತ್ತದೆ ಹಾಗೂ ಅಂತಹ ಹೆಚ್ಚುವರಿ ಹಣವನ್ನು ಸಕ್ರಮ ಹಣ ಎಂದು ಸಾಬೀತುಪಡಿಸುವುದು ನೌಕರರ ಹೊಣೆಯಾಗಿರುತ್ತದೆ
3. ನಗದು ಘೋಷಣೆ ವಹಿಯನ್ನು ಕಛೇರಿ ವೇಳೆಯ ಎಲ್ಲಾ ಸಮಯದಲ್ಲಿ ಯಾವುದೇ ಉನ್ನತ/ಸಕ್ಷಮ ಪ್ರಾಧಿಕಾರ/ಘಟಕದ ಮುಖ್ಯಸ್ಥರು/ವಿಭಾಗದ ಮುಖ್ಯಸ್ಥರ ತಪಾಸಣೆಗಾಗಿ ತೆರೆದಿರತಕ್ಕದ್ದು

ಮೇಲಿನ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸತಕ್ಕದ್ದು ಹಾಗೂ ಈ ಬಗ್ಗೆ ಯಾವುದೇ ಲೋಪವು ಕಂಡುಬಂದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ.

"ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"

7/3/22.
ಜಂಟಿ ನಿರ್ದೇಶಕರು (ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

ಆಯುಕ್ತರ ಕೇಂದ್ರ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿ ವರ್ಗದವರ ಮಾಹಿತಿಗಾಗಿ.

ಪ್ರತಿ:

1. ಆಯುಕ್ತರ ಆಪ್ತ ಶಾಖೆ
2. ನಿರ್ದೇಶಕರ ಆಪ್ತ ಶಾಖೆ